ಕರ್ನಾಟಕ ಸರ್ಕಾರ

# ಗ್ರಾಮ ಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ

## ಜಿಲ್ಲಾಧಿಕಾರಿಗಳ ಕಛೇರಿ, ಬಳ್ಳಾರಿ

## ಗ್ರಾಮ ಲೆಕ್ಕಿಗರ ಹುದ್ದೆಯ ನೇರ ನೇಮಕಾತಿ ಸಂಬಂಧ

## ಮಾಹಿತಿ ಸೂಚಿ 2018

# ಬಳ್ಳಾರಿ ಜಿಲ್ಲೆ

## ಗ್ರಾಮ ಲೆಕ್ಕಿಗರ ನೇರ ನೇಮಕಾತಿಗೆ ಸಂಬಂಧಿಸಿದಂತೆ ಆಯ್ಕೆ ಪ್ರಕ್ರಿಯೇ ವೇಳಾಪಟ್ಟಿ

## (CALENDR OF EVENTS)

| ಕ್ರ.ಸಂ | ವಿವರಗಳು | ದಿನಾಂಕ |
|---|---|---|
| 1 | ಅಧಿಸೂಚನೆ ಹೊರಡಿಸಲು ನಿಗಧಿಪಡಿಸಿದ ದಿನಾಂಕ | 24-03-2018 |
| 2 | ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ: | 11-04-2018 |
| 3 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 11-05-2018 |
| 4 | 1:5 ರ ಅನುಪಾತದಲ್ಲಿ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲು ನಿಗಧಿಪಡಿಸಿದ ದಿನಾಂಕ | 25-05-2018 |
| 5 | 1:5ರ ಅನುಪಾತದ ಪಟ್ಟಿಗೆ ಅಭ್ಯರ್ಥಿಗಳು ಆಕ್ಷೇಪಣೆ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 08-06-2018 |
| 6 | 1:5ರ ಅನುಪಾತದ ಅಭ್ಯರ್ಥಿಗಳು ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಜರಾಗಲು ನಿಗಧಿಪಡಿಸಿದ ದಿನಾಂಕ | 19-06-2018 ಬೆಳಗ್ಗೆ 10-30 ಗಂಟೆಗೆ |
| 7 | ತಾತ್ಕಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ನಿಗಧಿಪಡಿಸಿದ ದಿನಾಂಕ | 28-06-2018 |
| 8 | ತಾತ್ಕಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 12-07-2018 |
| 9 | ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ನಿಗಧಿಪಡಿಸಿ ದಿನಾಂಕ | 19-07-2018 |
| 10 | ಅರ್ಜಿ ಸಲ್ಲಿಸಬೇಕಾದ ವೆಬ್ ಸೈಟ್ ದಿನಾಂಕ | http://ballari-va.kar.nic.in |
| 11 | ಸ್ಪಷ್ಟೀಕರಣ/ ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ | 08392-271202 |

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ ಜಿಲ್ಲೆ, ಬಳ್ಳಾರಿ-583101

**OFFICE OF THE DEPUTY COMMISSIONER, BALLARI DISTRICT, BALLARI-583101**

Telephone : 08392-277100. Fax : 08392-272538 Email: dcbellary@gmail.com


**ಸಂ:ಕಂ:ಸಿಬ್ಬಂದಿ-2/100/2017-18** **ದಿನಾಂಕ :24.03.2018**

## :ಅಧಿಸೂಚನೆ:

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಬಳ್ಳಾರಿ ಜಿಲ್ಲೆಯಲ್ಲಿ ಮುಂಬಡ್ತಿ ವರ್ಗಾವಣೆ ಇನ್ನಿತರೆ ಕಾರಣಗಳಿಂದ 37 ಗ್ರಾಮ ಲೆಕ್ಕಿಗರ ಹುದ್ದೆಗಳು ತೆರವಾಗಿರುತ್ತವೆ. ಆದ್ದರಿಂದ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬಾರ್ಡಿನೇಟ್ ಬ್ರಾಂಚ್) (ಕೇಡರ್ ಎಂಡ್ ರಿಕ್ರ್ಯೂಟ್‌ಮೆಂಟ್) (ತಿದ್ದುಪಡಿ) ನಿಯಮಗಳು 2008 ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಸುತ್ತೋಲೆ ಸಂ:ಕಂ.ಇ.299-ಬಿಎಸ್‌ಸಿ/2006 ದಿನಾಂಕ:03-2-2009 ರಲ್ಲಿ ಸರ್ಕಾರದ ಪತ್ರ ಸಂ:ಕಂ.ಇ/04/ಬಿಎಸ್‌ಸಿ/2011 ದಿನಾಂಕ: 25-02-2011 ಮತ್ತು ಅ.ಸ.ಪ ಸಂಖ್ಯೆ/ಆರ್.ಡಿ/33/ಡಿಎಸ್‌ಪಿ/2012 ದಿನಾಂಕ: 21-06-2012 ರಲ್ಲಿ ಅನುಮೋದನೆ ನೀಡಿದೆ. ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 43 ಹೆಚ್.ಕೆ.ಸಿ. 2013 ದಿನಾಂಕ: 29.01.2014 ರಲ್ಲಿ ಸಂವಿಧಾನ ಅನುಚ್ಛೇಧ 371 (ಜೆ) ರ ಪ್ರಕಾರ ಈ ಕಾರ್ಯಾಲಯದ ಅಧಿಸೂಚನೆ ಸಂ:ಕಂ:ಸಿಬ್ಬಂದಿ-1: 251:2014-15 ದಿನಾಂಕ:25.02.2015 ರಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅಂದರೆ ಸ್ಥಳೀಯ/ ಸ್ಥಳೀಯೇತರ ಅಭ್ಯರ್ಥಿಗಳಿಗಾಗಿ ನೇಮಕಾತಿಯಲ್ಲಿ ಮೀಸಲಾತಿಯನ್ನು ಸರ್ಕಾರದ ಅಧಿಕೃತ ಜ್ಞಾಪನಾ ಪತ್ರದ ಸಂಖ್ಯೆ/ಸಿಆಸುಇ/33/ಹೈಕಲು/2014 ಬೆಂಗಳೂರು ದಿನಾಂಕ: 10.04.2014 ರಂತೆ ಅಳವಡಿಸಿಕೊಂಡು ಗ್ರಾಮ ಲೆಕ್ಕಿಗರ ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ.

### ಗ್ರಾಮ ಲೆಕ್ಕಿಗರ ಖಾಲಿ ಇರುವ ಹುದ್ದೆಗಳ ವಿವರಗಳು ಈ ಕೆಳಗಿನಂತಿವೆ

### ಹುದ್ದೆಗಳ ವರ್ಗೀಕರಣ

| ವರ್ಗ | ಹುದ್ದೆಗಳು | ಮ.ಅ | ಮಾ.ಸೈ | ಯೋ.ನಿ | ಗ್ರಾ.ಅ. | ಕ.ಮ.ಅ | ಸಾಮಾನ್ಯ | ಅಂ.ವಿ | ಒಟ್ಟು |
|---|---|---|---|---|---|---|---|---|---|
| ಸಾ.ಅ | 18 | 6 | 1 | 2 | 4 | 1 | 3 | 1 | 18 |
| ಪ.ಜಾತಿ | 6 | 4 | 0 | 0 | 1 | 1 | 0 | 0 | 6 |
| ಪ.ಪಂ | 2 | 0 | 0 | 0 | 2 | 0 | 0 | 0 | 2 |
| ಪ್ರ ವರ್ಗ I | 1 | 0 | 0 | 0 | 0 | 0 | 0 | 1 | 1 |
| II ಎ | 6 | 4 | 0 | 0 | 1 | 1 | 0 | 0 | 6 |
| II ಬಿ | 1 | 0 | 0 | 0 | 0 | 0 | 0 | 1 | 1 |
| III ಎ | 3 | 0 | 0 | 2 | 0 | 0 | 0 | 1 | 3 |
| III ಬಿ | 1 | 0 | 0 | 0 | 0 | 0 | 0 | 1 | 1 |
| ಒಟ್ಟು | 38 | 14 | 1 | 2 | 10 | 3 | 3 | 5 | 38 |

## ಹುದ್ದೆಗಳ ವರ್ಗೀಕರಣ: ಸ್ಥಳೀಯ ಅಭ್ಯರ್ಥಿಗಳಿಗಾಗಿ ಭರ್ತಿ ಮಾಡಲಾಗುವ ಅಭ್ಯರ್ಥಿಗಳ ಸಂಖ್ಯೆ: 29

- ರೋಸ್ಟರ್ ಬಿಂದು 67 ರಿಂದ ಪ್ರಾರಂಭಿಸಿ 95ಕ್ಕೆ ಮುಕ್ತಾಯಗೊಳಿಸಿದೆ (ಮೊದಲನೆ ಸೈಕಲ್)

| ವರ್ಗ | ಹುದ್ದೆಗಳು | ಮ.ಅ | ಮಾ.ಸೈ | ಯೋ.ನಿ | ಗ್ರಾ.ಅ. | ಕ.ಮ.ಅ | ಸಾಮಾನ್ಯ | ಅಂ.ವಿ | ಒಟ್ಟು |
|---|---|---|---|---|---|---|---|---|---|
| ಸಾ.ಅ | 14 | 4 | 1 | 1 | 3 | 1 | 3 | 1 | 14 |
| ಪ.ಜಾತಿ | 5 | 3 | 0 | 0 | 1 | 1 | 0 | 0 | 5 |
| ಪ.ಪಂ | 1 | 0 | 0 | 0 | 1 | 0 | 0 | 0 | 1 |
| ಪ್ರ ವರ್ಗ I | 1 | 0 | 0 | 0 | 0 | 0 | 0 | 1 | 1 |
| II ಎ | 4 | 2 | 0 | 0 | 1 | 1 | 0 | 0 | 4 |
| II ಬಿ | 1 | 0 | 0 | 0 | 0 | 0 | 0 | 1 | 1 |
| III ಎ | 2 | 0 | 0 | 0 | 1 | 0 | 0 | 1 | 2 |
| III ಬಿ | 1 | 0 | 0 | 0 | 0 | 0 | 0 | 1 | 1 |
| ಒಟ್ಟು | 29 | 9 | 1 | 1 | 7 | 3 | 3 | 5 | 29 |

## ಹುದ್ದೆಗಳ ವರ್ಗೀಕರಣ: Non-371ಜೆ ಅಡಿಯಲ್ಲಿ ಸ್ಥಳೀಯೇತರ ಅಭ್ಯರ್ಥಿಗಳಿಗಾಗಿ ಭರ್ತಿ ಮಾಡಲಾಗುವ ಅಭ್ಯರ್ಥಿಗಳ ಸಂಖ್ಯೆ: 09

- ರೋಸ್ಟರ್ ಬಿಂದು 69 ರಿಂದ ಪ್ರಾರಂಭಿಸಿ 77 ಕ್ಕೆ ಮುಕ್ತಾಯಗೊಳಿಸಿದೆ (ಮೊದಲನೆ ಸೈಕಲ್)

| ವರ್ಗ | ಹುದ್ದೆಗಳು | ಮ.ಅ | ಮಾ.ಸೈ | ಯೋ.ನಿ | ಗ್ರಾ.ಅ. | ಕ.ಮ.ಅ. | ಸಾಮಾನ್ಯ | ಅಂ.ವಿ | ಒಟ್ಟು |
|---|---|---|---|---|---|---|---|---|---|
| ಸಾ.ಅ | 4 | 2 | 0 | 1 | 1 | 0 | 0 | 0 | 4 |
| ಪ.ಜಾತಿ | 1 | 1 | 0 | 0 | 0 | 0 | 0 | 0 | 1 |
| ಪ.ಪಂ | 1 | 0 | 0 | 0 | 1 | 0 | 0 | 0 | 1 |
| ಪ್ರ ವರ್ಗ I | 0 | 0 | 0 | 0 | 0 | 0 | 0 | 0 | 0 |
| II ಎ | 2 | 2 | 0 | 0 | 0 | 0 | 0 | 0 | 2 |
| II ಬಿ | 0 | 0 | 0 | 0 | 0 | 0 | 0 | 0 | 0 |
| III ಎ | 1 | 0 | 0 | 0 | 1 | 0 | 0 | 0 | 1 |
| III ಬಿ | 0 | 0 | 0 | 0 | 0 | 0 | 0 | 0 | 0 |
| ಒಟ್ಟು | 9 | 5 | 0 | 1 | 3 | 0 | 0 | 0 | 9 |

1) **ಅರ್ಜಿ ಸಲ್ಲಿಸುವ ವಿಧಾನ:** ಅರ್ಜಿಗಳನ್ನು ಆನ್ ಲೈನ್ (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. **ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

2) **ಅರ್ಜಿ ಶುಲ್ಕ:**

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮಾ.ಸೈ. ಹಾಗೂ ಅಂಗವಿಕಲ. | ರೂ.100-00 |
| ಸಾಮಾನ್ಯ ವರ್ಗ, 2ಎ,2ಬಿ,3ಎ, 3ಬಿ ವರ್ಗಕ್ಕೆ | ರೂ.200-00 |

3) **ಆನ್‌ಲೈನ್(ON LINE) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:** ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ http://ballari-va.kar.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್ ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು

ಸ್ವೀಕೃತಿ ಪತ್ರ (Acknowledgement Slip) ಮತ್ತು ದ್ವಿ-ಪ್ರತಿ ಚಲನ್‌ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್‌ನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕಿನ ಯಾವುದಾದರೂ ಶಾಖೆಯ ಜಿಲ್ಲಾಧಿಕಾರಿಗಳು, ಬಳ್ಳಾರಿ ಖಾತೆ **ಎಸ್.ಬಿ.ನಂ.64043310450**ಕ್ಕೆ ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್‌ನ್ನು ಮತ್ತು ಚಲಾನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗಧಿಪಡಿಸಿದ **ದಿನಾಂಕ: 19.06.2018 ರಂದು ಹಾಜರುಪಡಿಸತಕ್ಕದ್ದು. ಬ್ಯಾಂಕಿನಲ್ಲಿ ನಿಗಧಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ:11.05.2018 ಆಗಿರುತ್ತದೆ. ಪಾವತಿಸಿದ ಚಲನ್ ಮಾತ್ರ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ದಿನಾಂಕ: 16.05.2018 ರಂದು ಕೊನೆಯ ದಿನಾಂಕವಾಗಿರುತ್ತದೆ.** ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೆ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗೆ ಹೊಂದಿಸಿಕೊಳ್ಳಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಭ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

(1) ಅರ್ಜಿಗಳನ್ನು ದಿನಾಂಕ: 11.04.2018 ರಿಂದ 11.05.2018 ಒಳಗಾಗಿ ಸಲ್ಲಿಸತಕ್ಕದ್ದು

(2) ಅರ್ಜಿ ಶುಲ್ಕವನ್ನು ದಿನಾಂಕ:-11.04.2018 ರಿಂದ 11.05.2018 ರವರೆಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯಲ್ಲಿ ಬ್ಯಾಂಕ್ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು. **ಪಾವತಿಸಿದ ಚಲನ್ ಮಾತ್ರ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ದಿನಾಂಕ:16.05.2018 ರಂದು ಕೊನೆಯ ದಿನಾಂಕವಾಗಿರುತ್ತದೆ.**

4) **ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.

5) **<u>ಶೈಕ್ಷಣಿಕ ವಿದ್ಯಾರ್ಹತೆ:</u>**

1) ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು.

2) ಮೇಲ್ಕಂಡ ವಿದ್ಯಾರ್ಹತೆಯನ್ನು ಹೊರತುಪಡಿಸಿ, ಇನ್ನಿತರ ಯಾವುದೇ ತತ್ಸಮಾನ ವಿದ್ಯಾರ್ಹತೆಗಳನ್ನು ಈ ಹುದ್ದೆಗಳಿಗೆ ಪರಿಗಣಿಸಲಾಗುವುದಿಲ್ಲ.

3) ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಹೊಂದಿರಬೇಕು.

**6) <u>ವೇತನ ಶ್ರೇಣಿ:</u>** ರೂ: 11600–200–12000–250–13000–300–14200–350–15600–400–17200–450–19000– 500–21000.

**7) <u>ವಯೋಮಿತಿ:</u>** ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| ಕ್ರಮ ಸಂಖ್ಯೆ | ಮೀಸಲಾತಿ | ಕನಿಷ್ಠ | ಗರಿಷ್ಠ |
|---|---|---|---|
| 1 | ಪ.ಜಾ/ಪ.ಪಂ/ಪ್ರ–1 | 18 | 40 |
| 2 | 2ಎ, 2ಬಿ, 3ಎ, 3ಬಿ. | 18 | 38 |
| 3 | ಸಾಮಾನ್ಯ ವರ್ಗ | 18 | 35 |

ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.) ಅಥವಾ ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ. ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) 1977 ರ ನಿಯಮಾವಳಿಗಳ ನಿಯಮ 6ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದ್ದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 6 ರಂತೆ ಗರಿಷ್ಠ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

ಎ) ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿಸವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ (10) ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಬಿ) ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು:

ಸಿ) ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

ಡಿ) ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

ಇ) ವಿಧವೆ ಅಭ್ಯರ್ಥಿಗಳಿಗೆ 10 ವರ್ಷಗಳು.

**8) ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:**

1) ಪಜಾ/ಪಪಂ ಅಭ್ಯರ್ಥಿಗಳು ನಮೂನೆ–ಡಿ ರಲ್ಲಿ

2) ಪ್ರವರ್ಗ –1 ರ ಅಭ್ಯರ್ಥಿಗಳು ನಮೂನೆ–ಇ ರಲ್ಲಿ

2) 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ–ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ:–**11.05.2018** ರ ಒಳಗೆ ಅರ್ಹತೆಯನ್ನು ಪಡೆದಿರಬೇಕು.

**3) ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.**

**9) ಗ್ರಾಮೀಣ ಅಭ್ಯರ್ಥಿ:**

1) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.

2) ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ, ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟು ಕೊಂಡಿರತಕ್ಕದ್ದು.

3) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2ರ ಬಗ್ಗೆ ಪ್ರಮಾಣ ಪತ್ರದ ಜೊತೆಗೆ ನಮೂನೆ–1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟು ಕೊಂಡಿರತಕ್ಕದ್ದು **(ನಮೂನೆ 1 & 2)**

**ಸೂಚನೆ:** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ–2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾದ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. ಎಸ್.ಎಸ್.ಎ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

**10) ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು

**11) ಯೋಜನಾ ನಿರಾಶ್ರಿತ ಅಭ್ಯರ್ಥಿ:**

ಯೋಜನೆಗಳಿಂದ ನಿರಾಶ್ರಿತ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂ: ಸಿಆಸುಇ 44:ನೇಸನಿ 2001 ದಿನಾಂಕ:-27-07-2001 ರಲ್ಲಿ ಸೂಚಿಸಿರುವಂತೆ ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು **(ನಮೂನೆ-3)**

**12) ಅಂಗವಿಕಲರ ಮೀಸಲಾತಿ ಬಗ್ಗೆ:**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9 (1-ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ "ಸಿ" ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡ 5ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ/128/ಸೇನೆನಿ/2006 ದಿನಾಂಕ 01.08.2009 ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 100 ಬಿಎಸ್‌ಸಿ 2011 ದಿನಾಂಕ: 29.06.2012 ರನ್ವಯ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1) ಕುಷ್ಟ ರೋಗದಿಂದ ಗುಣಮುಖರಾದವರು (leprosy cured) 2. ಶ್ರವಣ ದೋಷವುಳ್ಳವರು (Impaired) 3. ಮಾನಸಿಕ ಅಸ್ವಸ್ಥತೆ (Mentally ill) 4. ದೈಹಿಕ ಅಂಗವಿಕಲತೆಯುಳ್ಳ (Loco motor Disability) **ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರೆ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.** ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ.128.ಸೆನೆನಿ.2005 ದಿನಾಂಕ:-19.11.2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಲಗತ್ತಿಸಿದೆ.

**13) ಮಾಜಿ ಸೈನಿಕ ಮೀಸಲಾತಿ ಬಗ್ಗೆ:-**

ಮಾಜಿ ಸೈನಿಕ ಎಂದರೆ ಸಶಸ್ತ್ರದಳಗಳಾದ ನಿಯಮಿತ ಭೂದಳ, ನೌಕದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯೂರಿಟಿಕೋರ್, ಜನರಲ್ ರಿಸರ್ವ್ ಇಂಜೀನಿಯರಿಂಗ್ ಫೋರ್ಸ್, ಲೋ-ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ.

ಸೂಚನೆ:- ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ:11-05-2018 ರೊಳಗೆ ಅರ್ಹತೆಯನ್ನು ಪಡೆದಿರಬೇಕು.

**14) ಆಯ್ಕೆ ವಿಧಾನ:**

ಕರ್ನಾಟಕ ಜನರಲ್ ಸರ್ವೀಸಸ್ (Revenue Subordinate Branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ

(ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಪರೀಕ್ಷೆ ಅಥವಾ CBSC ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (On merit) ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ 1:5ರ ಅನುಪಾತದ ಪಟ್ಟಿಯ ಪರಿಶೀಲನಾ ಪಟ್ಟಿಯನ್ನು ದಿನಾಂಕ:25.05.2018 ರಂದು ಪ್ರಕಟಿಸಲಾಗುವುದು.

**15) ಪ್ರಮುಖ ಸೂಚನೆಗಳು:**

ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ನಿಗಧಿಪಡಿಸಿದ ದಿನಾಂಕ:19.06.2018 ರಂದು ಪರಿಶೀಲನೆಗೆ ಹಾಜರು ಪಡಿಸತಕ್ಕದ್ದು.

- **ಸ್ಥಳೀಯ ಅಭ್ಯರ್ಥಿಗಳು ಸ್ಥಳೀಯ ವೃಂದದಲ್ಲಿ ಆಯ್ಕೆಯಾಗದೇ ಒಂದುವೇಳೆ ಮೆರಿಟ್ ಆಧಾರದ ಮೇಲೆ ಸ್ಥಳಿಯೇತರ ವೃಂದದಲ್ಲಿ ಆಯ್ಕೆಯಾಗುವ ಅವಕಾಶವಿದ್ದಲ್ಲಿ ತಮ್ಮ ಒಪ್ಪಿಗೆಯನ್ನು ಅರ್ಜಿ ಸಲ್ಲಿಸುವ ಸಂಧರ್ಭದಲ್ಲಿ ಪ್ರತ್ಯೇಕವಾಗಿ ನಮೂದಿಸತಕ್ಕದ್ದು. ಹೀಗೆ ಸ್ಥಳಿಯೇತರ ವೃಂದದಲ್ಲಿ ಆಯ್ಕೆಯಾಗುವ ಸ್ಥಳೀಯ ಅಭ್ಯರ್ಥಿಗಳು ತಮ್ಮ ಪೂರ್ಣ ಸೇವೆಯನ್ನು ಸ್ಥಳಿಯೇತರ ವೃಂದದಲ್ಲಿ ಮುಂದುವರೆಸಬೇಕಾಗುತ್ತದೆ.**
- ಪಿ.ಯು.ಸಿ ಪರೀಕ್ಷೆ ಅಥವಾ CBSC ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯ ಪ್ರಮಾಣ ಪತ್ರ.
- ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ. ಅಥವಾ ಕ್ಯುಮುಲೇಟಿವ್ ದಾಖಲೆ)
- ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು.
- ಪರಿಶಿಷ್ಟ ಜಾತಿ– ಪರಿಶಿಷ್ಟ ಪಂಗಡ (ನಮೂನೆ–ಡಿ) ಮತ್ತು ಪ್ರವರ್ಗ–1 (ನಮೂನೆ ಇ) ಹಾಗೂ 2ಎ, 2ಬಿ, 3ಎ, 3ಬಿ (ನಮೂನೆ–ಎಫ್) ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.
- ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.

**16) ಸಾಮಾನ್ಯ ಸೂಚನೆಗಳು:**

1) ನೈತಿಕ ದುರ್ನಡತೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ

ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದುಹಾಕಿದ್ದಲ್ಲಿ/ ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

2) ಅರ್ಜಿಯಲ್ಲಿ ತಪ್ಪು /ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

3) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

5) ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್‌ಲೈನ್ ಮುಖಾಂತರ ವೆಬ್ ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು.

6) ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ

7) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.

8) ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ ನೌಕರಿ ಸೇವೆಯಲ್ಲಿ ಇರುವ ತಮ್ಮ ಇಲಾಖೆಯ ಮುಖ್ಯಸ್ಥರ ನಿರಾಕ್ಷೇಪಣಾ ಪತ್ರವನ್ನು ಹೊಂದಿರತಕ್ಕದ್ದು.

9) ಅಂಗವಿಕಲ ಮೀಸಲಾತಿ ಪಡೆಯಲಿಚ್ಚಿಸುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಖ್ಯೆ ಸಿಆಸುಇ/115/ನೇನನಿ/2005 ದಿನಾಂಕ: 19-11-2005 ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

10) ಗ್ರಾಮೀಣ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಿನಾಂಕ:13-02-2001ರ ಸರ್ಕಾರದ ಆದೇಶ ಸಂ: ಸಿಆಸುಇ-8/ಸೇನನಿ/2001 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ರುಜುವನ್ನು ಪಡೆದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.

11) ಪ್ರಕಟಿಸಿರುವ ಹುದ್ದೆಗಳನ್ನು ಹೆಚ್ಚು ಮಾಡುವ ಅಥವಾ ಕಡಿಮೆ ಮಾಡುವ ಹಕ್ಕು ನೇಮಕಾತಿ ಪ್ರಾಧಿಕಾರಕ್ಕೆ ದತ್ತವಾಗಿರುತ್ತದೆ.

12) **ಅರ್ಜಿಯನ್ನು ಆನ್‌ಲೈನ್(ON LINE)** ಮೂಲಕ ಸಲ್ಲಿಸತಕ್ಕದ್ದು. ಆನ್‌ಲೈನ್ ವೆಬ್ ಸೈಟ್ http://ballari-va.kar.nic.in (click on recruitment) ಆನ್ ಲೈನ್ ಅರ್ಜಿ ದಿನಾಂಕ:11.04.2018 ರಿಂದ ದಿನಾಂಕ:11.05.2018 ಸಂಜೆ 5-30 ರವರೆಗೆ ಮಾತ್ರ ಲಭ್ಯವಿರುತ್ತದೆ. Online ಹೊರತುಪಡಿಸಿ ಇತರೆ ಯಾವುದೇ ವಿಧದಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

13) ನಿಗಧಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಮೀಸಲಾಗನುಗುಣವಾಗಿ ಪರಿಶೀಲನಾ ಪಟ್ಟಿಯನ್ನು ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಪರಿಶೀಲನಾ ಪಟ್ಟಿಯಲ್ಲಿನ ಅಭ್ಯರ್ಥಿಗಳು ನಿಗದಿತ ದಿನಾಂಕದಂದು (19.06.2018) ಮೂಲ ದಾಖಲೆಗಳ ಪರಿಶೀಲನೆಗಾಗಿ ಹಾಜರಾಗಬೇಕಾಗಿರುತ್ತದೆ.

14) ನಿಗದಿತ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ. ಮತ್ತು ಪರಿಶೀಲನಾ ಪಟ್ಟಿಯ ಅಭ್ಯರ್ಥಿಗಳಿಗೆ ಯಾವುದೇ ಪ್ರತ್ಯೇಕ ಸೂಚನಾ ಪತ್ರವನ್ನು ಈ ಕಾರ್ಯಾಲಯದಿಂದ ಕಳುಹಿಸಲಾಗುವುದಿಲ್ಲ

15) ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು

16) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪ್ರಥಮ ಭಾಷೆಯಲ್ಲಿ ಮತ್ತು ಎರಡನೇ ಭಾಷೆಯಲ್ಲಿ ಕನ್ನಡ ಹೊಂದಿರದ ಅಭ್ಯರ್ಥಿಗಳಿಗೆ ಈ ಕಛೇರಿಯಿಂದ ನಿಗಧಿಪಡಿಸುವ ಕನ್ನಡ ಭಾಷೆಯ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗಬೇಕಾಗುತ್ತದೆ.

17) ಸಂವಿಧಾನ ಅನುಚ್ಛೇದ ಕಲಂ 371 (ಜೆ) ರ ಪ್ರಕಾರ ಮೀಸಲಾತಿ ಬಯಸುವ ಅಭ್ಯರ್ಥಿಗಳು (ಹೈದ್ರಾಬಾದ ಕರ್ನಾಟಕ ವ್ಯಾಪ್ತಿಗೆ ಒಳಪಡುವ ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ) ಸಂಬಂಧಪಟ್ಟ ಪ್ರಾಧಿಕಾರದಿಂದ ಅರ್ಹತಾ ಪ್ರಮಾಣ ಪತ್ರ ಲಗತ್ತಿಸತಕ್ಕದ್ದು.

24/03/18

**(ಡಾ: ವಿ.ರಾಮ್‌ಪ್ರಸಾತ್ ಮನೋಹರ್)** ಭಾ.ಆ.ಸೇ
ಅಧ್ಯಕ್ಷರು
ಗ್ರಾಮ ಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು,
ಬಳ್ಳಾರಿ ಜಿಲ್ಲೆ ಬಳ್ಳಾರಿ

ಇವರಿಗೆ,
ಸಂಕಲನಾಧಿಕಾರಿ ಸರ್ಕಾರಿ ಹೊರವಲಯ ಮುದ್ರಣಾಲಯ, ಆರ್.ವಿ. ಕಾಲೇಜು ಅಂಚೆ, 8ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು 560059 ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 200 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ ಬಳ್ಳಾರಿ ಇವರಿಗೆ ಒದಗಿಸಲು ಕೋರಿದೆ.

**ಪ್ರತಿಯನ್ನು:**

1) ಮಹಾಲೇಖಪಾಲರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ
2) ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರಿಗೆ ಅವಗಾಹನೆಗಾಗಿ ಸಲ್ಲಿಸಿದೆ
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ಸೇವೆಗಳು) ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಅವಗಾಹನೆಗಾಗಿ ಸಲ್ಲಿಸಿದೆ
4) ಪ್ರಾದೇಶಿಕ ಆಯುಕ್ತರು, ಕಲಬುರಗಿ/ ಬೆಂಗಳೂರು/ ಬೆಳಗಾಂ/ ಮೈಸೂರು ವಿಭಾಗ ರವರಿಗೆ ಅವಗಾಹನೆಗಾಗಿ ಸಲ್ಲಿಸಿದೆ
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಬಳ್ಳಾರಿ
7) ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಇಲಾಖೆ, ಬಳ್ಳಾರಿ
8) ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ/ ಜಿಲ್ಲೆಯ ಎಲ್ಲಾ ತಹಶೀಲ್ದಾರರು/ ವಿಶೇಷ ತಹಶೀಲ್ದಾರರುಗಳಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
9) ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಬಳ್ಳಾರಿ ಇವರಿಗೆ ಕಳುಹಿಸುತ್ತಾ, ಸದರಿ ಮಾಹಿತಿಯನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಲಾಗಿದೆ ಹಾಗೂ ಪ್ರಕಟಿಸಿದ ಬಗ್ಗೆ ಪತ್ರಿಕಾ ತುಣುಕುಗಳನ್ನು ಈ ಕಾರ್ಯಾಲಯಕ್ಕೆ ಸಲ್ಲಿಸುವಂತೆ ಸೂಚಿಸಿದೆ.
10) ಈ ಕಾರ್ಯಾಲಯದ ಸೂಚನಾ ಫಲಕಕ್ಕೆ/ ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ